## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:– 2018–19ನೇ ಸಾಲಿನಿಂದ ಪೂರ್ಣಾವಧಿ ಪಿ.ಎಚ್.ಡಿ ಅಧ್ಯಯನದಲ್ಲಿ ತೊಡಗುವ ಹಿಂದುಳಿದ ವರ್ಗಗಳ ಅರ್ಹ ವಿದ್ಯಾರ್ಥಿಗಳಿಗೆ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್‌ನ್ನು ರೂ.5000/– ದಿಂದ ರೂ.10,000/–ಗಳಿಗೆ ಹೆಚ್ಚಿಸುವ ಕುರಿತು.

ಓದಲಾಗಿದೆ:–
1. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 495 ಬಿಎಂಎಸ್ 2015, ದಿನಾಂಕ:11.06.2015.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಪ್ರಸ್ತಾವನೆ ಸಂಖ್ಯೆ: ಹಿಂವಕಇ/ತ–2/ಪಿಎಚ್‌ಡಿ/ಸಿ.ಆರ್–1/2018–19, ದಿನಾಂಕ: 07.04.2018.

ಆಯುಕ್ತರ ಕಚೇರಿ ಹಿಂದುಳಿದ ವರ್ಗಗಳ ಇಲಾಖೆ, ಬೆಂಗಳೂರು ಸಂಖ್ಯೆ: ... ತಾ: 23/08/18

******

**ಪ್ರಸ್ತಾವನೆ:–**

ಮೇಲೆ ಓದಲಾದ ಕ್ರಮಸಂಖ್ಯೆ:(1)ರ ಆದೇಶಲ್ಲಿ 2015–16ನೇ ಸಾಲಿನಿಂದ ಪಿಎಚ್‌ಡಿ ಪೂರ್ಣಾವಧಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ 1000 ವಿದ್ಯಾರ್ಥಿಗಳಿಗೆ ಮಾಸಿಕ ರೂ.5000/–ದಂತೆ ವ್ಯಾಸಂಗ ವೇತನ/ಫೆಲೋಶಿಪ್‌ನ್ನು ನೀಡಲು ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರಮಸಂಖ್ಯೆ:(2)ರಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಪ್ರಸ್ತಾವನೆ ದಿನಾಂಕ:07.04.2018ರಲ್ಲಿ 2018–19ನೇ ಸಾಲಿಗೆ ಆಯವ್ಯಯ ಭಾಷಣದಲ್ಲಿ ಕಂಡಿಕೆ:198ರಲ್ಲಿ ಘೋಷಿಸಿರುವಂತೆ ಪೂರ್ಣಾವಧಿ ಪಿಎಚ್‌ಡಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್‌ನ್ನು ರೂ.5000/–ಗಳಿಂದ ರೂ.10,000/–ಗಳಿಗೆ ಹೆಚ್ಚಿಸಲಾಗುವುದು ಎಂದು ಘೋಷಿಸಿರುವಂತೆ 2018–19ನೇ ಸಾಲಿನ ಆಯವ್ಯಯದಲ್ಲಿ ರಾಜ್ಯವಲಯ ಲೆಕ್ಕಶೀರ್ಷಿಕೆ:2225–03–277–2–37ರಡಿ ತರಬೇತಿ, ಅರಿವು ಮತ್ತು ಪ್ರೋತ್ಸಾಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಕಾರ್ಯಕ್ರಮಕ್ಕಾಗಿ ರೂ.5,500.00 ಲಕ್ಷಗಳ ಅನುದಾನ ಒದಗಿಸಲಾಗಿರುತ್ತದೆ. ಪೂರ್ಣಾವಧಿ ಪಿಎಚ್‌ಡಿ ಅಧ್ಯಯನದಲ್ಲಿ ತೊಡಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅರ್ಹ ಹೊಸ ವಿದ್ಯಾರ್ಥಿಗಳು ಹಾಗೂ ನವೀಕರಣ ವಿದ್ಯಾರ್ಥಿಗಳಿಗೆ 2018–19ನೇ ಸಾಲಿನಿಂದ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್‌ನ್ನು ರೂ.5000/–ಗಳಿಂದ ರೂ.10,000/–ಗಳಿಗೆ ಹೆಚ್ಚಿಸಿ ಸರ್ಕಾರದ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 704 ಬಿಎಂಎಸ್ 2018, ಬೆಂಗಳೂರು**
**ದಿನಾಂಕ:18–08–2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2018–19ನೇ ಸಾಲಿನಿಂದ ಪೂರ್ಣಾವಧಿ ಪಿ.ಎಚ್.ಡಿ ಅಧ್ಯಯನದಲ್ಲಿ ತೊಡಗುವ ಹಿಂದುಳಿದ ವರ್ಗಗಳ ಅರ್ಹ ವಿದ್ಯಾರ್ಥಿಗಳಿಗೆ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್‌ನ್ನು ರೂ.5000/– ದಿಂದ ರೂ.10,000/–ಗಳಿಗೆ ಹೆಚ್ಚಿಸಿ ಅನುಮೋದನೆ ನೀಡಿ ಆದೇಶಿಸಿದೆ.

2018–19ನೇ ಸಾಲಿನಲ್ಲಿ ಈ ಪ್ರಸ್ತಾವನೆಗೆ ಸಂಬಂಧಿಸಿದಂತೆ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಚಾಲ್ತಿಯಲ್ಲಿರುವ Delegation of Financial Powers ರಂತೆ ಕ್ರಮವಹಿಸುವ ಹಾಗೂ ಪ್ರಸಕ್ತ ಸಾಲಿಗೆ ಒದಗಿಸಿರುವ ಅನುದಾನದ ಮಿತಿಯಲ್ಲಿಯೇ ಕಾರ್ಯಕ್ರಮಗಳನ್ನು ಜಾರಿಗೊಳಿಸುವ ಮತ್ತು ಹಾಲಿ ಇರುವ ಮಾರ್ಗಸೂಚಿಯನ್ವಯ, ನಿಯಮಾನುಸಾರ ಹಾಗೂ ಪಾರದರ್ಶಕತೆಯನ್ವಯ ಅನುಷ್ಠಾನಗೊಳಿಸುವ ಷರತ್ತಿಗೊಳಪಟ್ಟಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 463 ವೆಚ್ಚ-3/2018 ದಿನಾಂಕ:14.08.2018 ರಲ್ಲಿ ನೀಡಿರುವ ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ:ಪಿಡಿ 23 ಐಎಂಎಂ 2018, ದಿನಾಂಕ:07.05.2018ರ ಸಹಮತಿಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕದ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

(ಆರ್.ಭಾಸ್ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಇವರಿಗೆ:-

1) ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ) (ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು.
2) ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3) ರಾಜ್ಯ ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
4) ಎಲ್ಲಾ ಜಿಲ್ಲಾಧಿಕಾರಿಗಳು.
5) ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
6) ಎಲ್ಲಾ ಜಿಲ್ಲೆಗಳ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿಗಳು.

(4–6: ಆಯುಕ್ತರು, ಹಿಂವಕ, ಇವರ ಮುಖಾಂತರ)

7) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3&9), ವಿಧಾನಸೌಧ.
9) ನಿರ್ದೇಶಕರು, ಪಿ.ಎಂ.ಐ ವಿಭಾಗ, ಯೋಜನೆ, ಕಾರ್ಯಕ್ರಮ, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ.

ಪ್ರತಿ ಮಾಹಿತಿಗಾಗಿ:-

1) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ.
2) ಸರ್ಕಾರದ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3) ಸರ್ಕಾರದ ಉಪ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರು,
4) ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.

*****